ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀಮತಿ ಭಾರತಿ, ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಚಿತ್ರದುರ್ಗ ಇವರ ವಿರುದ್ಧ ಶಿಸ್ತು ಕ್ರಮ – ವಿಚಾರಣಾಧಿಕಾರಿಯನ್ನು ನೇಮಿಸುವ ಬಗ್ಗೆ.

ಓದಲಾಗಿದೆ

1. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ: ಮುಇಂ: ಪಂರಾಇಂಇ: ಕಾ.ಇಂ-2: ತಾಂಸ-2: ಸ.ಇಂ-32: 2021-22 ದಿನಾಂಕ: 01.04.2021
2. ಸರ್ಕಾರದ ಕಾರಣ ಕೇಳುವ ನೋಟೀಸ್ ಸಂಖ್ಯೆ. ಗ್ರಾಅಪ 40 ಇಎನ್‌ಕ್ಯೂ 2021 ದಿನಾಂಕ. 01.01.2022.
3. ಶ್ರೀಮತಿ ಭಾರತಿ, ಕಾರ್ಯಪಾಲಕ ಇಂಜಿನಿಯರ್, ಇವರು ಸಲ್ಲಿಸಿರುವ ಲಿಖಿತ ಹೇಳಿಕೆ ದಿನಾಂಕ: 01.02.2022

ಪ್ರಸ್ತಾವನೆ:

ಶ್ರೀ ಕೆ.ಪಿ. ಹೇಮಣ್ಣ ಬಿನ್ ಕೆ.ಜಿ. ಪಾಲಣ್ಣ, ಕಾಲುವೆಹಳ್ಳಿ ಗ್ರಾಮ, ಚಳ್ಳಕೆರೆ ತಾಲ್ಲೂಕು ರವರು ಚಳ್ಳಕೆರೆ ತಾಲ್ಲೂಕಿನ ತಾಂಡಾ ಅಭಿವೃದ್ಧಿ ನಿಗಮ ಅಡಿಯಲ್ಲಿ ಅನುಷ್ಠಾನಗೊಳಿಸಲಾಗಿರುವ ಕಾಮಗಾರಿಗಳಲ್ಲಿ ಅವ್ಯವಹಾರವಾಗಿದೆಯೆಂದು ಸಲ್ಲಿಸಿದ್ದ ದೂರಿನ ಮೇರೆಗೆ ಅಧೀಕ್ಷಕ ಇಂಜಿನಿಯರ್, ಪಂ.ರಾ.ಇಂ.ವೃತ್ತ, ದಾವಣಗೆರೆ ಇವರು ಕಾಮಗಾರಿಗಳ ತಪಾಸಣೆ ನಡೆಸಿ ಸಲ್ಲಿಸಿದ್ದ ತನಿಖಾ ವರದಿ ಹಾಗೂ ಕಾಮಗಾರಿಗಳ ಛಾಯಚಿತ್ರಗಳನ್ನು ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು ಇವರು ಮೇಲೆ ಕ್ರಮ ಸಂಖ್ಯೆ: 1ರಲ್ಲಿ ಓದಲಾದ ದಿನಾಂಕ: 01.04.2021ರ ಪತ್ರದ ಜೊತೆ ಲಗತ್ತಿಸಿ ಕಳುಹಿಸಿ ಶ್ರೀಮತಿ ಭಾರತಿ, ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಚಿತ್ರದುರ್ಗ ಇವರು ಚಳ್ಳಕೆರೆ ತಾಲ್ಲೂಕಿನ ತಾಂಡಾ ಅಭಿವೃದ್ಧಿ ನಿಗಮ ಅಡಿಯಲ್ಲಿ ಕೈಗೊಳ್ಳಲಾದ ಹಲವಾರು ಕಾಮಗಾರಿಗಳನ್ನು ಮಂಜೂರಾದ ಅಂದಾಜಿನ ಅನುಸಾರ ಅನುಷ್ಠಾನಗೊಳಿಸದೇ ಸರ್ಕಾರಕ್ಕೆ ಆರ್ಥಿಕ ನಷ್ಟ ಉಂಟಾಗಿರುವುದು ಮೇಲ್ನೋಟಕ್ಕೆ ಕಂಡುಬರುವುದರಿಂದ ಸದರಿಯವರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳುವಂತೆ ಕೋರಿ ಸಲ್ಲಿಸಿದ್ದ ಪ್ರಸ್ತಾವನೆಯನ್ನು ಸರ್ಕಾರವು ಪರಿಶೀಲಿಸಿ, ಸದರಿ ಆಪಾದಿತರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11ರಂತೆ ಇಲಾಖಾ ವಿಚಾರಣೆ ನಡೆಸಲು ತೀರ್ಮಾನಿಸಿ ಸದರಿಯವರಿಗೆ ಮೇಲೆ ಕ್ರಮ ಸಂಖ್ಯೆ: (3)ರಲ್ಲಿ ಓದಲಾದ ದಿನಾಂಕ: 01.01.2022ರ ಕಾರಣ ಕೇಳುವ ನೋಟೀಸಿನೊಂದಿಗೆ ದೋಷಾರೋಪಣಾ ಪಟ್ಟಿಯನ್ನು ಜಾರಿ ಮಾಡಲಾಗಿತ್ತು.

ಸರ್ಕಾರದ ಕಾರಣ ಕೇಳುವ ನೋಟೀಸಿಗೆ ಪ್ರತಿಯಾಗಿ ಶ್ರೀಮತಿ ಭಾರತಿ, ಕಾರ್ಯಪಾಲಕ ಇಂಜಿನಿಯರ್ ಮೇಲೆ ಕ್ರಮ ಸಂಖ್ಯೆ (3)ರಲ್ಲಿ ಓದಲಾದಂತೆ ಸಲ್ಲಿಸಿರುವ ಲಿಖಿತ ವಿವರಣೆಯಲ್ಲಿ ತಮ್ಮ ವಿರುದ್ಧದ ಆರೋಪದ ಕುರಿತು ನಿರ್ದಿಷ್ಟವಾದ ಉತ್ತರಗಳನ್ನು ಸಲ್ಲಿಸದೇ ತಮ್ಮ ವಿರುದ್ಧದ ಆರೋಪಗಳು ಸತ್ಯಕ್ಕೆ ದೂರವಾಗಿದೆಯೆಂದು, ಸರ್ಕಾರಕ್ಕೆ ಆರ್ಥಿಕ ನಷ್ಟ ಉಂಟು ಮಾಡಿರುವುದಿಲ್ಲವೆಂದು ತಿಳಿಸಿ ಇನ್ನು ಮುಂದೆ ದೂರು ಬಾರದ ರೀತಿಯಲ್ಲಿ ಎಚ್ಚರಿಕೆ ವಹಿಸುವುದಾಗಿ ತಿಳಿಸಿದ್ದಾರೆ. ಸದರಿ ಅಧಿಕಾರಿಯ ವಿವರಣೆಯು ಪರಿಗಣನೆಗೆ ಅರ್ಹವಾಗಿರುವುದಿಲ್ಲ. ಆದರೆ ಸದರಿ ಪ್ರಕರಣದಲ್ಲಿ ಸರ್ಕಾರಕ್ಕೆ ಬೃಹತ್ ಪ್ರಮಾಣದ ಆರ್ಥಿಕ ನಷ್ಟ ಉಂಟು ಮಾಡಿರುವ ಆರೋಪವು ಗಂಭೀರ ಸ್ವರೂಪದ್ದಾಗಿರುವುದರಿಂದ ಸದರಿ ಆರೋಪಗಳ ಸತ್ಯಾಸತ್ಯತೆಯನ್ನು ಅರಿಯುವ ಸಲುವಾಗಿ ಸದರಿಯವರ ವಿರುದ್ಧ ವಿವರವಾದ ಇಲಾಖಾ ವಿಚಾರಣೆಯನ್ನು ನಡೆಸುವುದು ಸೂಕ್ತವೆಂದು ಸರ್ಕಾರವು ನಿರ್ಧರಿಸಿದೆ. ಆದ್ದರಿಂದ ಈ ಕೆಳಕಂಡ ಆದೇಶ.

**ಆದೇಶ ಸಂಖ್ಯೆ : ಗ್ರಾಅಪ 40 ಇಎನ್‌ಕ್ಯೂ 2021 ಬೆಂಗಳೂರು, ದಿನಾಂಕ : 15.03.2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರವು ಶ್ರೀಮತಿ ಭಾರತಿ, ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಚಿತ್ರದುರ್ಗ ಇವರ ವಿರುದ್ಧದ ಆರೋಪಗಳ ಬಗ್ಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 11ರನ್ವಯ ಇಲಾಖಾ ವಿಚಾರಣೆಯನ್ನು ನಡೆಸಲು ಶ್ರೀ ನಿಯಾಜ್ ಅಹ್ಮದ್ ಎಸ್. ದಾಫೇದರ್, ನಿವೃತ್ತ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಇವರನ್ನು ವಿಚಾರಣಾಧಿಕಾರಿಯನ್ನಾಗಿ ಮತ್ತು ತಾಂತ್ರಿಕ ಸಹಾಯಕರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ, ಬೆಂಗಳೂರು ಇವರನ್ನು ಮಂಡನಾಧಿಕಾರಿಯನ್ನಾಗಿ ನೇಮಿಸಿದೆ.

ವಿಚಾರಣಾಧಿಕಾರಿಗಳು ಇಲಾಖಾ ವಿಚಾರಣೆಯನ್ನು ಆದಷ್ಟು ತ್ವರಿತವಾಗಿ ಕೈಗೊಂಡು, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 11(23) ರಂತೆ ಇಲಾಖಾ ವಿಚಾರಣೆಯ ವರದಿಯನ್ನು ಮೂರು ತಿಂಗಳೊಳಗಾಗಿ ಸರ್ಕಾರಕ್ಕೆ ಸಲ್ಲಿಸುವುದು

ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು ಇವರು ಇಲಾಖಾ ವಿಚಾರಣೆಗೆ ಅವಶ್ಯವಿರುವ ಸ್ಥಳಾವಕಾಶ, ಲೇಖನ ಸಾಮಗ್ರಿ ಹಾಗೂ ಸಿಬ್ಬಂದಿಗಳ ಸೇವೆಯನ್ನು ನೀಡಲು ತಿಳಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ,
ಮತ್ತು ಅವರ ಹೆಸರಿನಲ್ಲಿ

15/3
(ಕೆ.ನದೀಮ್‌ಅಹ್ಮದ್),
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಇವರಿಗೆ:

15/03

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು (ಲೆಕ್ಕಪತ್ರ ೧& ೨) / (ಆಡಿಟ್)